ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಸ್ವಾಯತ್ತ)

ಊಟಿ ರಸ್ತೆ, ಮೈಸೂರು – 570 025

ಸ್ಥಾಪನೆ: 1964

ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ:28.12.2016

## ಪ್ರಕಟಣೆ ಕೃಪೆಗಾಗಿ

## ಇಂಗಾಲದ ಹತೋಟಿಗೆ ನಾವೆಲ್ಲರೂ ಒಟ್ಟಾಗಿ ಶ್ರಮಿಸಬೇಕಿದೆ

– ಡಾ. ಮುರಳೀಕನಕಸಭಾಯ್

ಇಂದು ನಗರದ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ವಾಣಿಜ್ಯ ಸ್ನಾತಕೋತ್ತರ ವಿಭಾಗದಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಉಪನ್ಯಾಸಕರಾಗಿ ಆಗಮಿಸಿದ್ದ ಚಿಕಾಗೋದಲ್ಲಿ (ಯು.ಎಸ್.ಎ) ಎನ್ವಿರಾನ್‌ಮೆಂಟಲ್ ಫೈನಾನ್ಸಿಯಲ್ ಪ್ರೊಡಕ್ಷನ್(ಎಲ್‌ಎಲ್‌ಸಿ) ವ್ಯವಸ್ಥಾಪಕ ನಿರ್ದೇಶಕ ಡಾ. ಮುರಳೀಕನಕಸಭಾಯ್ ಇಂದು ಇಂಗಾಲವು ಅಧಿಕ ಪ್ರಮಾಣದಲ್ಲಿ ಬಿಡುಗಡೆಯಾಗುತ್ತಿದ್ದು, ಅದರ ದುಷ್ಪರಿಣಾಮಗಳ ಬಗ್ಗೆ ತೀವ್ರ ಆತಂಕ ವ್ಯಕ್ತಪಡಿಸಿದರು. ಅತಿಯಾದ ಪ್ರಮಾಣದ ಅರಣ್ಯನಾಶ, ವಿಷಾನಿಲದ ಉದ್ದಿಮೆಗಳು ಇತ್ಯಾದಿಗಳಿಂದ ಪರಿಸರ ಹಾಗೂ ಆರ್ಥಿಕ ಚಟುವಟಿಕೆಗಳ ಹತೋಟಿ ಹಿಡಿಯುವ ಮೂಲಕ ಮುಂದುವರೆದ ದೇಶಗಳು ಅಭಿವೃದ್ಧಿ ಹೊಂದುತ್ತಿರುವ ದೇಶಗಳನ್ನು ನಿಯಂತ್ರಿಸುವ ತಂತ್ರ ಬಳಸುತ್ತಿವೆ. ಇದರಿಂದಾಗಿ ಕೃಷಿ ಮತ್ತು ಆರೋಗ್ಯದ ಮೇಲೆ ನೇರ ಪರಿಣಾಮ ಉಂಟಾಗುತ್ತಿದೆ. ಇಂಗಾಲ ಹೊರಸೂಸುವಿಕೆಯನ್ನು ಕಡಿಮೆ ಮಾಡುವ ಒಪ್ಪಂದಕ್ಕೆ ಭಾರತವೂ ಸಹ ಒಪ್ಪಿಗೆ ಸೂಚಿಸಿದೆ. ಭಾರತವು ನವೀಕರಿಸಬಹುದಾದ ಇಂಧನಗಳ ಉತ್ಪಾದನೆ & ಬಳಕೆಯಲ್ಲಿ ಈಗಾಗಲೆ ಮಂಚೂಣಿಯಲ್ಲಿದೆ. ಈ ಸಂಬಂಧ ಕೇಂದ್ರ ಸರಕಾರವು ಹಲವಾರು ಯೋಜನೆಗಳನ್ನು ಸಹ ಹಮ್ಮಿಕೊಂಡಿದೆ ಎಂದು ಯೋಜನೆಗಳ ಬಗ್ಗೆ ಪರಿಚಯಿಸಿದರು. ಹಣಕಾಸು ಮತ್ತು ಪರಿಸರ ವಿಷಯವು ಪೂರಕವಾಗಿದ್ದು ಈ ಹಿನ್ನೆಲೆಯಲ್ಲಿ, ಹಣಕಾಸಿನ ಉಪಉತ್ಪನ್ನಗಳ ಪರಿಚಯ ಮತ್ತು ಅವುಗಳ ಮಾರುಕಟ್ಟೆ ಅವಶ್ಯಕತೆ ಇದ್ದು ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳು ಈಗಾಗಲೆ ಇಂತವುಗಳನ್ನು ಪರಿಚಯಿಸಿವೆ. ಭಾರತವು ಸಹ ಅವಶ್ಯಕವಾಗಿರುವ ಮೂಲಸೌಕರ್ಯವನ್ನು ನೀಡುತ್ತಿದೆ. ಇನ್ನು ಹೆಚ್ಚಿನ ಸಂಶೋಧನೆ ಮತ್ತು ಪ್ರಚಾರದ ಅವಶ್ಯಕತೆ ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮೈಸೂರು ವಿಶ್ವವಿದ್ಯಾನಿಲಯ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ. ಜಿ. ಕೊಟ್ರೇಶ್ ಇಂಗಾಲವನ್ನು ಹತೋಟಿಗೆ ತರುವಲ್ಲಿ ಮಹತ್ವದ ಸಂಗತಿಗಳನ್ನು ತಿಳಿಸಿದರು.

ಸಮಾರಂಭದಲ್ಲಿ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯ, ಪ್ರೊ. ಡಿ.ಎಸ್. ಸದಾಶಿವಮೂರ್ತಿ, ಅರ್ಥಶಾಸ್ತ್ರ ವಿಭಾಗದ ಅಧ್ಯಾಪಕರು ಉಪಸ್ಥಿತರಿದ್ದರು. ನಮ್ಮ ಕಾಲೇಜಿನ ವಿದ್ಯಾರ್ಥಿಗಳಲ್ಲದೆ ಕೊಳ್ಳೇಗಾಲ, ಚಾಮರಾಜನಗರ ಹಾಗೂ ಮೈಸೂರಿನ ಸರಸ್ವತಿಪುರಂನಲ್ಲಿನ ಜೆಎಸ್‌ಎಸ್ ವಾಣಿಜ್ಯ ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಜರಿದ್ದರು. ವಿಭಾಗದ ಅಧ್ಯಾಪಕರುಗಳು ಸಹ ಕಾರ್ಯಕ್ರಮದಲ್ಲಿ ಹಾಜರಿದ್ದರು. ವಿಭಾಗದ ಮುಖ್ಯಸ್ಥರಾದ ಡಾ. ಹೆಚ್.ಸಿ. ಹೊನ್ನಪ್ಪ ಸ್ವಾಗತಿಸಿದರು, ಪ್ರೊ. ಸುನಿತಾ ಕಾರ್ಯಕ್ರಮ ನಿರೂಪಿಸಿದರು. ಆರಂಭದಲ್ಲಿ ಕು. ದಾಕ್ಷಾಯಣಿ ಪ್ರಾರ್ಥನೆ ನಡೆಸಿಕೊಟ್ಟರು.

(ಪ್ರೊ ಎಂ ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-25

ಗೆ

ಸಂಪಾದಕರು

– – – – – – – – – –

– – – – – – – – – – –

ಮೈಸೂರು